3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದಲ್ಲಿ , ತುಮಕೂರು

**Spl.C. No.242/2024**

ಪ್ರಾಸಾ 2

ಚಾಸಾ 15

ಹೆಸರು ನವೀನ್ ಕುಮಾರ್

ತಂದೆಯ ಹೆಸರು ಲಕ್ಷ್ಮೀನರಸಿಂಹ

ವಯಸ್ಸು 50 ವರ್ಷ

ಉದ್ಯೋಗ HC 301, ಕ್ಯಾತಸಂದ್ರ ಪೋಲೀಸ್ ಠಾಣೆ

ವಾಸಸ್ಥಳ ತುಮಕೂರು

ಸಾಕ್ಷಿಯನ್ನು ದಿನಾಂಕ 27.06.2026 ರಂದು ಕರೆಸಿ ಪ್ರಮಾಣೀಕರಿಸಲಾಯ್ತು.

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರವರಿಂದಃ**

1) ನಾನು ಕಳೆದ ಮೂರು ವರ್ಷಗಳಿಂದ ಕ್ಯಾತಸಂದ್ರ ಪೋಲೀಸ್ ಠಾಣೆಯಲ್ಲಿ ಮುಖ್ಯಪೇದೆಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2) ದಿನಾಂಕ 22.02.2024 ರಂದು ಬೆಳಿಗ್ಗೆ 11 ಗಂಟೆಗೆ ಚಾಸಾ.1 ರವರು ಠಾಣೆಗೆ ಹಾಜರಾಗಿ ನಿಪಿ.1 ರಂತೆ ದೂರನ್ನು ಸಲ್ಲಿಸಿರುತ್ತಾರೆ. ನಿಪಿ.1 ರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ನಂತರ ಪ್ರಕರಣವನ್ನು ದಾಖಲು ಮಾಡಿಕೊಂಡು ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಪ್ರ.ವ.ವರದಿಯನ್ನು ನಿಪಿ.7 ಎಂದು, ಸಾಕ್ಷಿಯ ಸಹಿಯನ್ನು ನಿಪಿ.7(ಎ) ಎಂದು ಗುರುತಿಸಲಾಯಿತು. ನಂತರ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ.16 ರವರಿಗೆ ಹಸ್ತಾಂತರಿಸಿರುತ್ತೇನೆ.

**ಪಾಟೀಸವಾಲುಃ ಆರೋಪಿ ಪರ ಶ್ರೀ.S.R.R. ವಕೀಲರಿಂದ :**

3) ದೂರನ್ನು ನೀಡಲು ಚಾಸಾ.1 ರವರೊಂದಿಗೆ ಅವರ ಗಂಡ ಬಂದಿದ್ದರು. ದೂರನ್ನು ಅವರೇ ಬರೆದುಕೊಂಡು ಬಂದಿದ್ದರು. ಪ್ರಕರಣವನ್ನು ದಾಖಲು ಮಾಡಿಕೊಳ್ಳುವುದಕ್ಕಿಂತ ಮುಂಚೆ ದೂರಿನಲ್ಲಿರುವ ಅಂಶಗಳನ್ನು ನಾನು ಪರಿಶೀಲನೆ ಮಾಡಿರುತ್ತೇನೆ. ದೂರಿನಲ್ಲಿರುವ ಅಂಶಗಳು ಸಿವಿಲ್ ಸ್ವರೂಪದ್ದಾಗಿದ್ದರೂ ಸಹ ಆರೋಪಿತರ ವಿರುದ್ದ ನಾನು ಸುಳ್ಳು ಪ್ರಕರಣವನ್ನು ದಾಖಲು ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಚಾಸಾ.1 ರವರು ಆರೋಪಿತರ ಸ್ವಾಧೀಪನಕ್ಕೆ ತೊಂದರೆ ನೀಡಬಾರದು ಎಂದು ತಡೆಯಾಜ್ಞೆ ಇರುವ ಬಗ್ಗೆ ನನಗೆ ಗೊತ್ತಿಲ್ಲ. ಚಾಸಾ.1 ರವರು ನೀಡಿರುವ ಸುಳ್ಳು ದೂರನ್ನು ಪಡೆದುಕೊಂಡು ಆರೋಪಿತರ ವಿರುದ್ದ ಸುಳ್ಳು ಪ್ರಕರಣವನ್ನು ದಾಖಲು ಮಾಡಿಕೊಂಡಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸಾ ಸ ಇ ಎ ಓ

3 ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ತುಮಕೂರು.

ಸಾಕ್ಷಿಯ ಸಹಿ